ಕರ್ನಾಟಕ ಸರ್ಕಾರ

**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003**

ಸಂಖ್ಯೆ:ಪಿಯು.ಮೌಮಾವಿ1/ಪ-3/ಶುಲ್ಕ/04/2025 ದಿನಾಂಕ:16-05-2025

## ಸು ತ್ತೋ ೞ ಲೆ

**ವಿಷಯ: 2025 ನೇ ಸಾಲಿನಲ್ಲಿ ನಡೆಯಲಿರುವ ದ್ವಿತೀಯ ಪಿ.ಯು.ಸಿ ಪರೀಕ್ಷೆ-3 ಕ್ಕೆ ಪುನರಾವರ್ತಿತ ವಿದ್ಯಾರ್ಥಿಗಳು ಹಾಗೂ ಫಲಿತಾಂಶ ಉತ್ತಮಪಡಿಸಿಕೊಳ್ಳುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವ ಬಗ್ಗೆ.**

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ ಇಪಿ 203 ಎಸ್‌ಎಲ್‌ಬಿ 2023 ದಿನಾಂಕ:21/09/2023.

-------

2025 ನೇ ಸಾಲಿನಲ್ಲಿ ನಡೆಯಲಿರುವ ದ್ವಿತೀಯ ಪಿಯುಸಿ ಪರೀಕ್ಷೆ-3 ಕ್ಕೆ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಈ ಕೆಳಕಂಡಂತೆ ದಿನಾಂಕ ನಿಗದಿಪಡಿಸಲಾಗಿದೆ. ಎಲ್ಲಾ ಕಾಲೇಜಿನ ಪ್ರಾಂಶುಪಾಲರುಗಳು ಈ ಸುತ್ತೋಲೆಯನ್ನು ಕಡ್ಡಾಯವಾಗಿ ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸುವುದು ಮತ್ತು ಪ್ರಾಂಶುಪಾಲರುಗಳು ಈ ಕೆಳಗಿನಂತೆ ಸೂಚನೆಗಳನ್ನು ಪಾಲಿಸುವುದು.

1. 2025 ರ ಪರೀಕ್ಷೆ-1 ಮತ್ತು ಪರೀಕ್ಷೆ-2 ರಲ್ಲಿ ಉತ್ತೀರ್ಣರಾಗಿದ್ದು ಫಲಿತಾಂಶ ಉತ್ತಮಪಡಿಸಿಕೊಳ್ಳಲು 2025ರ ದ್ವಿತೀಯ ಪಿಯುಸಿ ಪರೀಕ್ಷೆ-3 ನ್ನು ಬರೆಯಲು ಇಚ್ಛಿಸಿದಲ್ಲಿ, ಅಂತಹ ವಿದ್ಯಾರ್ಥಿಗಳು ಫಲಿತಾಂಶ ಪಟ್ಟಿಯ ಆಧಾರದ ಮೇಲೆ ನಿಯಮಾನುಸಾರ ಫಲಿತಾಂಶ ಉತ್ತಮಪಡಿಸಿಕೊಳ್ಳಲು ಅರ್ಜಿಯನ್ನು ಕಾಲೇಜಿನಲ್ಲಿ ಪ್ರಾಂಶುಪಾಲರಿಗೆ ಸಲ್ಲಿಸುವುದು. ಸದರಿ ಪ್ರಕ್ರಿಯೆಗೆ ಮಂಡಲಿಯ ಅನುಮತಿ ಪಡೆಯುವ ಅವಶ್ಯಕತೆ ಇರುವುದಿಲ್ಲ.
2. 2025 ರ ದ್ವಿತೀಯ ಪಿಯುಸಿ ಪರೀಕ್ಷೆ-2 ರಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಮಂಡಲಿಯಿಂದ ನೀಡಲಾಗುವ ಫಲಿತಾಂಶ ಪಟ್ಟಿಯ (RESULT SHEET) ಆಧಾರದ ಮೇಲೆ ಪರೀಕ್ಷೆ-3 ಕ್ಕೆ ನೋಂದಾಯಿಸಿಕೊಂಡು ಮಂಡಲಿಯ PU EXAM-3 ಲಾಗಿನ್‌ನಲ್ಲಿ ವಿದ್ಯಾರ್ಥಿಗಳ ಮಾಹಿತಿಯನ್ನು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ಇಂದೀಕರಿಸುವುದು. **ಸದರಿ ವಿದ್ಯಾರ್ಥಿಗಳಿಂದ ಯಾವುದೇ ಪರೀಕ್ಷಾ ಶುಲ್ಕವನ್ನು ಪಡೆಯುವಂತಿಲ್ಲ.**
3. ಪರೀಕ್ಷೆ-1 ಕ್ಕೆ ನೊಂದಾಯಿಸಿಕೊಂಡು ಪರೀಕ್ಷೆ ಬರೆಯದೇ ಇರುವ ವಿದ್ಯಾರ್ಥಿಗಳು ಪರೀಕ್ಷೆ-3 ಕ್ಕೆ ಹಾಜರಾಗಬಹುದಾಗಿದೆ.
4. 2025ನೇ ಸಾಲಿಗಿಂತ ಹಿಂದಿನ ಪರೀಕ್ಷೆಗಳಲ್ಲಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಂದ ಮೂಲ ಅನುತ್ತೀರ್ಣ ಅಂಕಪಟ್ಟಿ/ಅರ್ಜಿ ಅಥವಾ ಹಿಂದಿನ ಎಂ.ಸಿ.ಎ.ಗಳ ಆಧಾರದ ಮೇಲೆ ಪ್ರಾಂಶುಪಾಲರು ಮಂಡಲಿಯ PU EXAM-3 ಲಾಗಿನ್‌ನಲ್ಲಿ ವಿದ್ಯಾರ್ಥಿಗಳ ಮಾಹಿತಿಯನ್ನು ಇಂಧೀಕರಿಸುವುದು.
5. 2006 ರಿಂದ ಹಿಂದಿನ ವರ್ಷಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಂದ ಮೂಲ ಅನುತ್ತೀರ್ಣ ಅಂಕಪಟ್ಟಿ/ಅರ್ಜಿ ಅಥವಾ ಹಿಂದಿನ ಎಂ.ಸಿ.ಎ.ಗಳ ಆಧಾರದ ಮೇಲೆ ಸಂಬಂಧಿಸಿದ ದಾಖಲೆಗಳನ್ನು ಪ್ರಾಂಶುಪಾಲರು ದೃಢೀಕರಿಸಿ, ಜಿಲ್ಲಾ ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, (ಪದವಿ ಪೂರ್ವ) ಇವರಿಗೆ ಸಲ್ಲಿಸುವುದು.

6. ಮರುಮೌಲ್ಯಮಾಪನ ಮತ್ತು ಮರುಎಣಿಕೆಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಮರುಮೌಲ್ಯಮಾಪನದ ಫಲಿತಾಂಶಕ್ಕೆ ಕಾಯದೆ ಅವಶ್ಯಕತೆಯಿದ್ದಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆ-3 ಕ್ಕೆ ನಿಗದಿತ ದಿನಾಂಕದೊಳಗಾಗಿ ನೊಂದಾಯಿಸಿಕೊಳ್ಳುವುದು.

2025 ರಲ್ಲಿ ನಡೆಸಲಾಗುವ ದ್ವಿತೀಯ ಪಿಯುಸಿ ಪರೀಕ್ಷೆ-3 ಕ್ಕೆ ಪುನರಾವರ್ತಿತ ವಿದ್ಯಾರ್ಥಿಗಳಿಗೆ (Not Completed) ಶುಲ್ಕ ಪಾವತಿಯಿಂದ ವಿನಾಯಿತಿ ನೀಡಲಾಗಿದೆ. ಪುನರಾವರ್ತಿತ ಅಭ್ಯರ್ಥಿಗಳು ದಿನಾಂಕ: 16-05-2025 ರಿಂದ 26-05-2025 ರವರೆಗೆ ಕಾಲೇಜಿನ ಪ್ರಾಂಶುಪಾಲರನ್ನು ಸಂಪರ್ಕಿಸಿ ಪರೀಕ್ಷೆ-3 ಕ್ಕೆ ನೋಂದಾಯಿಸಿಕೊಳ್ಳಬಹುದು.

| ಪುನರಾವರ್ತಿತ ವಿದ್ಯಾರ್ಥಿಗಳ ಮಾಹಿತಿಯನ್ನು ಪ್ರಾಂಶುಪಾಲರು ಮಂಡಲಿಯ PU EXAM-3 ಲಾಗಿನ್‌ನಲ್ಲಿ ಇಂದೀಕರಿಸಲು ಕೊನೆಯ ದಿನಾಂಕ | ಪ್ರಾಂಶುಪಾಲರು ಪರೀಕ್ಷಾ ಅರ್ಜಿಗಳನ್ನು ಜಿಲ್ಲಾ ಉಪನಿರ್ದೇಶಕರು (ಪಿಯು) ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಿನಾಂಕ |
|---|---|
| ದಿನಾಂಕ 16/05/2025 ರಿಂದ 26/05/2025 ರವರೆಗೆ | 27/05/2025 |

ಫಲಿತಾಂಶ ಉತ್ತಮಪಡಿಸಿಕೊಳ್ಳುವ ವಿದ್ಯಾರ್ಥಿಗಳು ಕೆಳಗಿನಂತೆ ಶುಲ್ಕವನ್ನು ಪಾವತಿಸಿ ನಿಗದಿತ ದಿನಾಂಕದೊಳಗೆ ದ್ವಿತೀಯ ಪಿಯುಸಿ ಪರೀಕ್ಷೆ-3 ಕ್ಕೆ ನೋಂದಾಯಿಸಿಕೊಳ್ಳಬಹುದು.

| ಫಲಿತಾಂಶ ಉತ್ತಮಪಡಿಸಿಕೊಳ್ಳಲು (IMPROVEMENT) ಶುಲ್ಕ | |
|---|---|
| ಪ್ರಥಮ ಬಾರಿಗೆ ಒಂದು ವಿಷಯಕ್ಕೆ | ರೂ. 175/- |
| ಎರಡನೇ ಬಾರಿಗೆ ಒಂದು ವಿಷಯಕ್ಕೆ | ರೂ. 350/- |

| ಫಲಿತಾಂಶ ಉತ್ತಮಪಡಿಸಿಕೊಳ್ಳುವ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ಹಾಗೂ ವಿದ್ಯಾರ್ಥಿಗಳ ಮಾಹಿತಿಯನ್ನು ಪ್ರಾಂಶುಪಾಲರು ಮಂಡಲಿಯ PU EXAM-3 ಲಾಗಿನ್‌ನಲ್ಲಿ ಇಂದೀಕರಿಸಲು ಕೊನೆಯ ದಿನಾಂಕ | | ಪ್ರಾಂಶುಪಾಲರು ಪರೀಕ್ಷಾ ಶುಲ್ಕವನ್ನು ಒಂದೇ ಕಂತಿನಲ್ಲಿ ಸಂದಾಯ ಮಾಡಬೇಕಾದ ದಿನಾಂಕ | ಪ್ರಾಂಶುಪಾಲರು ಪರೀಕ್ಷಾ ಅರ್ಜಿಗಳನ್ನು ಮೂಲ ಚಲನ್ ಸಹಿತ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಿನಾಂಕ |
|---|---|---|---|
| ದಂಡರಹಿತ | ದಿನಾಂಕ 16/05/2025 ರಿಂದ 23/05/2025 ರವರೆಗೆ | 26/05/2025 | 28/05/2025 |
| ದಂಡಸಹಿತ ದಿನಕ್ಕೆ ರೂ 50 ರಂತೆ | 24/05/2025 ರಿಂದ 26/05/2025ರವರೆಗೆ | 27/05/2025 | 28/05/2025 |

ಮೇಲಿನ ಶುಲ್ಕವನ್ನು ಪಾವತಿಸುವ ಸಂಬಂಧ ಪ್ರಾಂಶುಪಾಲರ PU EXAM-3 ಲಾಗಿನ್‌ನಲ್ಲಿ ಚಲನ್ ಸೃಜಿಸಲು ಅವಕಾಶ ಕಲ್ಪಿಸಿದ್ದು, ಶುಲ್ಕ ಪಾವತಿಯ ಮಾಹಿತಿಯನ್ನು ಚಲನ್ ನಲ್ಲಿ ಅಪ್ಲೋಡ್ ಮಾಡಿ ಸದರಿ ಚಲನ್ ಅನ್ನು ಮುದ್ರಿಸಿಕೊಂಡು ನಿಗದಿತ ಶುಲ್ಕವನ್ನು ಬೆಂಗಳೂರು-ಒನ್, ಕರ್ನಾಟಕ ಒನ್, ಗ್ರಾಮ-ಒನ್ ಹಾಗೂ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಶಾಖೆಗಳ ಮೂಲಕ ಪಾವತಿಸುವುದು. ಕೆ2 ಚಲನ್ ಅನ್ನು ಬಳಸಿ ಶುಲ್ಕ ಪಾವತಿಸಬಾರದು.

ಜಿಲ್ಲಾ ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, (ಪದವಿ ಪೂರ್ವ) ರವರು ಪ್ರಾಂಶುಪಾಲರಿಂದ ಸ್ವೀಕರಿಸಿದ ಪರೀಕ್ಷಾ ಅರ್ಜಿಗಳನ್ನು ಮಂಡಲಿಯ PU EXAM-3 ಲಾಗಿನ್‌ನಲ್ಲಿ ಇಂಧೀಕರಿಸಿರುವುದನ್ನು ಕಡ್ಡಾಯವಾಗಿ ಖಾತ್ರಿಪಡಿಸಿಕೊಂಡು ಚೆಕ್‌ಲಿಸ್ಟನ್ನು ಪರಿಶೀಲಿಸಿ, ಪ್ರಾಂಶುಪಾಲರುಗಳಿಂದ ಅಪ್‌ಡೇಟ್ ಮಾಡಿರುವುದಕ್ಕೆ ಮುಚ್ಚಳಿಕೆ ಪತ್ರ ಪಡೆದ ನಂತರ ಕಾಲೇಜುವಾರು ಕ್ರೋಢೀಕೃತ ವಿದ್ಯಾರ್ಥಿಗಳ ಪಟ್ಟಿ, ಹಣ ಪಾವತಿಸಿರುವ ಮೂಲ ಚಲನ್ ಹಾಗೂ ಮುಚ್ಚಳಿಕೆ ಪತ್ರಗಳನ್ನು **ಜಿಲ್ಲಾ ಉಪನಿರ್ದೇಶಕರು, (ಪಿಯು) ರವರ ಕಛೇರಿಯಲ್ಲಿಯೇ ಕಾಯ್ದಿರಿಸಿಟ್ಟುಕೊಳ್ಳುವುದು.**

ಅಧ್ಯಕ್ಷರು
ಕರ್ನಾಟಕ ಶಾಲಾ ಪರೀಕ್ಷೆ ಮತ್ತು
ಮೌಲ್ಯ ನಿರ್ಣಯ ಮಂಡಲಿ
ಬೆಂಗಳೂರು.

**ಪ್ರತಿಗಳು:-**

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರುಗಳು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ರವರ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ **(ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು ಹಾಗೂ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ನೊಂದಾಯಿಸಿಕೊಳ್ಳಲು)**
3. ಮಂಡಲಿಯ ಗಣಕ ಶಾಖೆಗೆ (ಮಂಡಲಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು)
4. ಹೆಚ್ಚುವರಿ/ಕಛೇರಿ ಪ್ರತಿ.